# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1059 |
| ಸದಸ್ಯರ ಹೆಸರು | : | ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 23-02-2024 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಈ ಅಂಗನವಾಡಿ ಕೇಂದ್ರಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು); | ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ 69899. ಜಿಲ್ಲಾವಾರು ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ. | ಈ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಮಕ್ಕಳಿಗೆ ಸರ್ಕಾರದಿಂದ ನೀಡುತ್ತಿರುವ ಸೌಕರ್ಯಗಳೇನು; (ವಿವರ ನೀಡುವುದು); | ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಮಕ್ಕಳಿಗೆ ಸರ್ಕಾರದಿಂದ ನೀಡುತ್ತಿರುವ ಸೌಕರ್ಯಗಳು ಈ ಕೆಳಗಿನಂತಿದೆ.<br><br>**<u>ಪೂರಕ ಪೌಷ್ಠಿಕ ಆಹಾರ :</u>**<br><br>ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br><br>• ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿದಿನ ರೂ.8.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.<br>• ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ. ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.<br>• 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್. ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br>• 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್. ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.<br>• ಆರೋಗ್ಯ ಮತ್ತು ಪೌಷ್ಠಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಠಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಠಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತಿದೆ. |

| | | |
|---|---|---|
| | | **ಜಂತುಹುಳು ನಿವಾರಣೆ / ಚುಚ್ಚುಮದ್ದು ಕಾರ್ಯಕ್ರಮ :**<br>6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.<br>**ಆರೋಗ್ಯ ತಪಾಸಣೆ :**<br>ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ 3 ತಿಂಗಳಿಗೊಮ್ಮೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.<br>**ಮಾಹಿತಿ ಸೇವೆ :**<br>ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ ಆರೋಗ್ಯ ಕೇಂದ್ರಕ್ಕೆ / ಪೌಷ್ಠಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಾರೆ. |
| ಇ | ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತಿರುವ ಆಹಾರ ಪದಾರ್ಥಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಪ್ರಕರಣಗಳ ವಿವರಗಳನ್ನು ನೀಡುವುದು; | ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಈಗಾಗಲೇ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲಾಗುತ್ತಿದೆ. ಅಂಗನವಾಡಿ ಕೇಂದ್ರಗಳಿಗೆ ಸರಬರಾಜಾಗುತ್ತಿರುವ ಪೂರಕ ಪೌಷ್ಠಿಕ ಆಹಾರವನ್ನು ಫಲಾನುಭವಿಗಳಿಗೆ ಒದಗಿಸುವ ಮುನ್ನ ಮತ್ತು ಒದಗಿಸಿದ ನಂತರದಲ್ಲಿಯೂ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೆ ಒಳಪಡಿಸುತ್ತಿದ್ದು, ಆಹಾರ ಪದಾರ್ಥಗಳ ಗುಣಮಟ್ಟವನ್ನು ಉತ್ತಮಪಡಿಸಲು ದಿನಾಂಕ: 11/10/2023 ರ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಎಂ.ಎಸ್.ಪಿ.ಟಿ.ಸಿ.ಗಳು ಅರ್ಹ ಬಿ.ಐ.ಎಸ್. ಪರವಾನಗಿ ಹೊಂದಿದ ಮಹಿಳಾ ಗುಂಪುಗಳೊಂದಿಗೆ ತಾಂತ್ರಿಕ ನೆರವನ್ನು ಪಡೆದು ಉತ್ತಮ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರ ಪದಾರ್ಥಗಳ ಸರಬರಾಜಿಗೆ ಕ್ರಮ ವಹಿಸಲಾಗುತ್ತಿದೆ.<br>ಮುಂದುವರೆದು, ಇಲಾಖಾ ಯೋಜನೆಗಳು ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುತ್ತಿರುವ ಬಗ್ಗೆ ವಲಯ ಮೇಲ್ವಿಚಾರಕಿಯರು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ, ನಿರೂಪಣಾಧಿಕಾರಿ, ಉಪ ನಿರ್ದೇಶಕರು ಹಾಗೂ ಬಾಲವಿಕಾಸ ಸಮಿತಿ ಸದಸ್ಯರು ಆಗಾಗ್ಗೆ ಅಂಗನವಾಡಿಗಳಿಗೆ ಭೇಟಿ ನೀಡಿ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. |
| ಈ. | ಆಹಾರ ಸರಬರಾಜುದಾರರೊಂದಿಗೆ ಇಲಾಖಾ ಅಧಿಕಾರಿಗಳು ಶಾಮೀಲಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವ ಪ್ರಕರಣಗಳ ವಿವರ ನೀಡುವುದು? | ಆಹಾರ ಸರಬರಾಜುದಾರರೊಂದಿಗೆ ಇಲಾಖಾ ಅಧಿಕಾರಿಗಳು ಶಾಮೀಲಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |

**ಸಂಖ್ಯೆ: ಮಮಇ 62 ಐಸಿಡಿ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1059 ಕ್ಕೆ ಒದಗಿಸಲಾದ ಅನುಬಂಧ**

| ಕ್ರ.ಸಂ | ಜಿಲ್ಲೆಯ ಹೆಸರು | ಕಾರ್ಯ ನಿರತ ಅಂಗನವಾಡಿ ಕೇಂದ್ರಗಳ ಸಂಖ್ಯೆ | ಕಾರ್ಯ ನಿರತ ಮಿನಿ ಅಂಗನವಾಡಿ ಕೇಂದ್ರಗಳ ಸಂಖ್ಯೆ | (450+3538 ಹೊಸ ಅಂಗನವಾಡಿಗಳು) ಕಾರ್ಯ ನಿರತ ಅಂಗನವಾಡಿ ಕೇಂದ್ರಗಳ ಸಂಖ್ಯೆ | ಆಹಾರ ಹಂಚಿಕೆ ದಿನಗಳು (ಸಂಚಿತ) | ಒಟ್ಟು ಮಕ್ಕಳ ಸಂಖ್ಯೆ |
|---|---|---|---|---|---|---|
| 1 | ಬಾಗಲಕೋಟೆ | 2204 | 17 | 223 | 250 | 167758 |
| 2 | ಬೆಂಗಳೂರು (ಗ್ರಾ) | 1164 | 65 | 48 | 252 | 50255 |
| 3 | ರಾಮನಗರ | 1301 | 242 | 43 | 175 | 55089 |
| 4 | ಬೆಂಗಳೂರು (ನ) | 2418 | 2 | 457 | 250 | 231152 |
| 5 | ಬೆಳಗಾವಿ | 5280 | 14 | 362 | 250 | 378542 |
| 6 | ಬಳ್ಳಾರಿ | 1229 | 13 | 116 | 250 | 113422 |
| 7 | ಬೀದರ್ | 1892 | 1 | 158 | 250 | 145222 |
| 8 | ವಿಜಯಪುರ | 2312 | 1 | 442 | 250 | 215791 |
| 9 | ಚಾಮರಾಜನಗರ | 1381 | 40 | 18 | 1412 | 51126 |
| 10 | ಚಿಕ್ಕಮಗಳೂರು | 1708 | 117 | 33 | 250 | 50826 |
| 11 | ಚಿತ್ರದುರ್ಗ | 2227 | 97 | 104 | 250 | 119902 |
| 12 | ಮಂಗಳೂರು | 2099 | 5 | 26 | | 106935 |
| 13 | ದಾವಣಗೆರೆ | 1678 | 43 | 50 | 250 | 103556 |
| 14 | ಧಾರವಾಡ | 1499 | 6 | 117 | 250 | 110407 |
| 15 | ಗದಗ | 1165 | 1 | 82 | | 78358 |
| 16 | ಕಲಬುರಗಿ | 3071 | 27 | 322 | 250 | 252640 |
| 17 | ಯಾದಗಿರಿ | 1365 | 21 | 182 | 249 | 130373 |
| 18 | ಹಾಸನ | 2332 | 191 | 168 | 250 | 76964 |
| 19 | ಹಾವೇರಿ | 1913 | 5 | 73 | 240 | 123853 |
| 20 | ಕೋಲಾರ | 2006 | 55 | 119 | 250 | 98678 |
| 21 | ಚಿಕ್ಕಬಳ್ಳಾಪುರ | 1861 | 100 | 53 | 250 | 74095 |
| 22 | ಕೊಡಗು | 857 | 14 | 12 | | 24212 |
| 23 | ಕೊಪ್ಪಳ | 1826 | 24 | 110 | 250 | 131361 |
| 24 | ಮಂಡ್ಯ | 2299 | 247 | 12 | 251 | 84567 |
| 25 | ಮೈಸೂರು | 2753 | 107 | 62 | | 137924 |
| 26 | ರಾಯಚೂರು | 2630 | 32 | 194 | 250 | 203148 |
| 27 | ಶಿವಮೊಗ್ಗ | 2178 | 261 | 124 | 250 | 96471 |
| 28 | ತುಮಕೂರು | 3679 | 416 | 104 | 250 | 136035 |
| 29 | ಉಡುಪಿ | 1191 | 0 | 31 | 250 | 47898 |
| 30 | ಉತ್ತರ ಕನ್ನಡ | 2551 | 136 | 95 | | 90541 |
| 31 | ವಿಜಯನಗರ | 1513 | 29 | 48 | 250 | 114341 |
| | **ರಾಜ್ಯದ ಒಟ್ಟು** | **63582** | **2329** | **3988** | | **3801442** |